1211 ಶ್ರೀ ರಮೇಶ್ ಬಂಡಿಸಿದ್ದೇಗೌಡ ಎ.ಬಿ. (ಶ್ರೀರಂಗಪಟ್ಟಣ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಾರ್ವಜನಿಕ ಆಸ್ಪತ್ರೆಯಲ್ಲಿ ವೈದ್ಯರ, ಸ್ತ್ರೀರೋಗ ತಜ್ಞರ ಹಾಗೂ ಇತರೆ ಸಿಬ್ಬಂದಿಗಳ ಕೊರತೆ ಎಷ್ಟು; ವಿವರ ನೀಡುವುದು;

ಆ) ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು;

ಇ) ಶ್ರೀರಂಗಪಟ್ಟಣ ಸರ್ಕಾರಿ ಆಸ್ಪತ್ರೆಯಲ್ಲಿ ಕಟ್ಟಡಗಳ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಕೈಗೊಂಡಿರುವ ಕ್ರಮವೇನು;

ಈ) ಶ್ರೀರಂಗಪಟ್ಟಣ ತಾಲ್ಲೂಕು ಅರಕೆರೆ ಸಮುದಾಯ ಆರೋಗ್ಯ ಕೇಂದ್ರದಲ್ಲಿ ವೈದ್ಯಾಧಿಕಾರಿಗಳ ವಸತಿ ಗೃಹಗಳು ದುಸ್ಥಿತಿಯಲ್ಲಿರುವುದು ಸರ್ಕಾರದ ಗಮನ ಹರಿಸಿದೆಯೇ; ಹಾಗಿದ್ದಲ್ಲಿ, ದುರಸ್ಥಿ ಕಾರ್ಯಕ್ಕೆ ಕೈಗೊಂಡಿರುವ ಕ್ರಮಗಳೇನು;

ಉ) ಶ್ರೀರಂಗಪಟ್ಟಣ ತಾಲ್ಲೂಕು ಅರಕೆರೆ ಸಮುದಾಯ ಆರೋಗ್ಯ ಕೇಂದ್ರಕ್ಕೆ ಅತ್ಯಾವಶ್ಯಕವಾಗಿ ಆಂಬ್ಯುಲೆನ್ಸ್ ಸೌಲಭ್ಯ ಅಗತ್ಯವಿದ್ದು, ಈ ಸಂಬಂಧವಾಗಿ ಈ ಸೌಲಭ್ಯವನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಬಿ. ಶ್ರೀರಾಮುಲು (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರ ಸಾರ್ವಜನಿಕ ಆಸ್ಪತ್ರೆಯಲ್ಲಿ 34 ತಜ್ಞರು/ವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿದ್ದು, 25 ತಜ್ಞರು/ವೈದ್ಯಾಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ, 4 ತಜ್ಞರ ಹುದ್ದೆ ಖಾಲಿ ಇದೆ. (ಹಿರಿಯ ವೈದ್ಯಾಧಿಕಾರಿ/ಫಿಜಿಷಿಯನ್ / ಶಸ್ತ್ರ ಚಿಕಿತ್ಸಕರು / ಓ.ಬಿ.ಜಿ. ತಜ್ಞರ ಹುದ್ದೆ ಖಾಲಿ ಇರುತ್ತದೆ). 5 ವೈದ್ಯಾಧಿಕಾರಿಗಳ ಹುದ್ದೆ ಖಾಲಿ ಇರುತ್ತದೆ. 270 ಇತರೆ ಸಿಬ್ಬಂದಿಗಳ ಹುದ್ದೆಗಳು ಮಂಜೂರಾಗಿದ್ದು, 178 ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ, 92 ಹುದ್ದೆಗಳು ಖಾಲಿ ಇವೆ.

ಆ) ತಜ್ಞ ವೈದ್ಯರ ಸೇವೆಯನ್ನು ಸಮಾಲೋಚನೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ಇದಕ್ಕಾಗಿ ಎನ್.ಆರ್.ಹೆಚ್.ಎಂ. ಯೋಜನೆಯಡಿ ರೂ. 25,000 ದಿಂದ ಗರಿಷ್ಟ

ರೂ. 50,000 ರವರೆಗೆ ಮಾಸಿಕ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 2008–09ನೇ ಸಾಲಿನಲ್ಲಿ 815 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ನೇಮಕಗೊಂಡಿದ್ದು ಆ ಪೈಕಿ 685 ವೈದ್ಯರು ಕಾರ್ಯ ವರದಿ ಮಾಡಿಕೊಂಡರು. 130 ವೈದ್ಯರು ಕಾರ್ಯ ವರದಿ ಮಾಡಿಕೊಳ್ಳಲಿಲ್ಲ. ಒಟ್ಟಾರೆ 182 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಪ್ರಸ್ತುತ ಖಾಲಿ ಇದ್ದು, ಈ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಇಲಾಖೆಯಲ್ಲಿ ಒಟ್ಟು 5021 ವಿವಿಧ ವೃಂಧದ ಅರೆ ವೈದ್ಯಕೀಯ ಸಿಬ್ಬಂದಿಯನ್ನು ವಿಶೇಷ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಹಾಗೂ ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ.

ಇ) ಶ್ರೀರಂಗಪಟ್ಟಣ ತಾಲ್ಲೂಕು ಆಸ್ಪತ್ರೆಯನ್ನು ಸರ್ಕಾರಿ ಆದೇಶ ಸಂಖ್ಯೆ: ಆಕುಕ 1068 ಸಿಜಿಎಂ 2006, ದಿನಾಂಕ 25–1–2007ರ ಆದೇಶದಲ್ಲಿ 30 ಹಾಸಿಗೆಗಳಿಂದ 100 ಹಾಸಿಗೆಗಳಿಗೆ ಮೇಲ್ದರ್ಜೆಗೇರಿಸಲಾಗಿದೆ. ಅಂದಾಜನ್ನು 2006–07ನೇ ಸಾಲಿನ ದರಪಟ್ಟಿಯಂತೆ ರೂ. 195.00 ಲಕ್ಷಗಳಿಗೆ ತಯಾರಿಸಿದ್ದು ಆಡಳಿತಾತ್ಮಕ ಅನುಮೋದನೆ ಹಾಗೂ ಅನುದಾನ ದೊರೆತ ನಂತರ ಮುಂದಿನ ಕ್ರಮಕೈಗೊಳ್ಳಲಾಗುವುದು.

ಈ) ಹೌದು. ಅನುದಾನ ಲಭ್ಯತೆಗೆ ಅನುಸಾರವಾಗಿ ದುರಸ್ಥಿತಿಯನ್ನು ಕೈಗೊಳ್ಳಲಾಗುವುದು. ಸ್ಥಳೀಯವಾಗಿ ಕ್ರಮ ವಹಿಸಲು ರೂ. 40.50 ಲಕ್ಷದ ಮೊತ್ತವನ್ನು ನಿಗದಿ ಮಾಡಲಾಗಿದೆ.

ಉ) ಶ್ರೀರಂಗಪಟ್ಟಣ ತಾಲ್ಲೂಕು ಅರಕೆರೆ ಸಮುದಾಯ ಆರೋಗ್ಯ ಕೇಂದ್ರಕ್ಕೆ ಆಂಬ್ಯುಲೆನ್ಸ್ ಸೌಲಭ್ಯ ಒದಗಿಸಿರುವುದಿಲ್ಲ. ಆದರೆ, ದಿನಾಂಕ 1–11–2008ರಲ್ಲಿ ಆಂಬ್ಯುಲೆನ್ಸ್ ಕಾರ್ಯಕ್ರಮವಾದ ಆರೋಗ್ಯ ಕವಚ ಜಾರಿಯಲ್ಲಿದೆ. ಹಂತ ಹಂತವಾಗಿ ರಾಜ್ಯದ ಎಲ್ಲಾ ಕ್ಷೇತ್ರಗಳಿಗೆ ಸೇವೆ ವಿಸ್ತರಿಸಲಾಗುತ್ತಿದೆ. ಸದರಿ ಸಮುದಾಯ ಆರೋಗ್ಯ ಕೇಂದ್ರದ ವ್ಯಾಪ್ತಿಗೂ ಆರೋಗ್ಯ ಕವಚದ ಸೇವೆಯನ್ನು ವಿಸ್ತರಿಸಲಾಗುತ್ತದೆ.

1196 ಶ್ರೀ ಸಿದ್ದು ಸವದಿ (ತೇರದಾಳ) ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?